ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಅ/90/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ: 12.03.2024.

**ಸುತ್ತೋಲೆ**

ವಿಷಯ: 2023-24ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ:
1) ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ಹಾಗೂ ದಿನಾಂಕ:24.01.2022.
2) ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021(ಇ), ದಿ:24.01.2022.
3) ಸರ್ಕಾರದ ಆದೇಶ ಸಂಖ್ಯೆ: ಇಡಿ 171 ಡಿಸಿಇ 2023, ದಿನಾಂಕ:28.08.2023 ಹಾಗೂ ದಿನಾಂಕ:13.09.2023.
4) ಸರ್ಕಾರದ ಆದೇಶ ಸಂಖ್ಯೆ: ಇಡಿ 171 ಡಿಸಿಇ 2023, ದಿನಾಂಕ:13.09.2023.
5) ಈ ಕಛೇರಿಯ ಸಮಸಂಖ್ಯೆ ಪ್ರಕಟಣೆ ದಿನಾಂಕ:24.08.2023 ಹಾಗೂ ದಿನಾಂಕ:13.09.2023.
6) ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:06.10.2023.
7) ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:02.11.2023.
8) ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:29.11.2023.

* * * * * * *

2023-24ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಕಾಲೇಜುಗಳಲ್ಲಿನ ಹೆಚ್ಚುವರಿ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ಇದುವರೆವಿಗೂ 3 ಹಂತದ ಕೌನ್ಸಲಿಂಗ್ ಪ್ರಕ್ರಿಯೆಯನ್ನು ನಡೆಸಲಾಗಿದ್ದು, ಅಭ್ಯರ್ಥಿಗಳು ಆನ್‌ಲೈನ್ ಕೌನ್ಸಿಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ಹಾಜರಾಗಿರುತ್ತಾರೆ.

ಅದರಂತೆ, ಕೌನ್ಸಿಲಿಂಗ್ ಮೂಲಕ ಆಯ್ಕೆಯಾಗಿ ಸಂಬಂದಪಟ್ಟ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರಲ್ಲಿ ಪ್ರಸ್ತುತ ಕೆಲವು ಅತಿಥಿ ಉಪನ್ಯಾಸಕರನ್ನು ಕಾರ್ಯಭಾರದ ಕೊರತೆಯಿಂದಾಗಿ ಸೇವೆಯಿಂದ ಬಿಡುಗಡೆಗೊಳಿಸಲಾಗಿದ್ದು, ಈ ರೀತಿ ಸೇವೆಯಿಂದ ಬಿಡುಗಡೆಗೊಂಡ ಅತಿಥಿ ಉಪನ್ಯಾಸಕರುಗಳು ಈ ಕಛೇರಿಗೆ ಮನವಿಗಳನ್ನು ಸಲ್ಲಿಸಿ, ಕಾರ್ಯಭಾರ ಇರುವ ಕಾಲೇಜುಗಳಿಗೆ ನೇಮಕ ಮಾಡಿಕೊಳ್ಳುವಂತೆ ಕೋರಿರುತ್ತಾರೆ. ಅಲ್ಲದೆ, ಕಾಲೇಜುಗಳಲ್ಲಿ ಪ್ರಸ್ತುತ ಇರುವ ಕಾರ್ಯಭಾರಕ್ಕೆ ಅನುಗುಣವಾಗಿ ಇನ್ನೂ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಿಕೊಳ್ಳಬೇಕಾಗಿರುತ್ತದೆ.

ಪ್ರಯುಕ್ತ, ಕಾರ್ಯಭಾರದ ಕೊರತೆಯಿಂದಾಗಿ ಸೇವೆಯಿಂದ ಬಿಡುಗಡೆಗೊಂಡ ಅತಿಥಿ ಉಪನ್ಯಾಸಕರಿಗೆ ಹಾಗೂ ಈಗಾಗಲೇ ನಡೆದ 03ನೇ ಸುತ್ತಿನ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ವಿಷಯವಾರು ಮೆರಿಟ್ ಪಟ್ಟಿಯಲ್ಲಿ ಕೊನೆಯದಾಗಿ ಆಯ್ಕೆ ಹೊಂದಿದ ಅಭ್ಯರ್ಥಿಯ ನಂತರದ

......2

ಮೆರಿಟ್ ಕ್ರಮ ಸಂಖ್ಯೆಯಿಂದ ಪ್ರಾರಂಭವಾಗುವ ಅಭ್ಯರ್ಥಿಗಳಿಗೆ ದಿನಾಂಕ:15.03.2024 ರಂದು 4ನೇ ಸುತ್ತಿನ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಆಯೋಜಿಸಲಾಗಿದೆ. ಅದರಂತೆ ಸಂಬಂಧಿಸಿದ ಅತಿಥಿ ಉಪನ್ಯಾಸಕರು/ಅಭ್ಯರ್ಥಿಗಳು ಕೌನ್ಸಿಲಿಂಗ್ ನಲ್ಲಿ ಭಾಗವಹಿಸಲು ತಿಳಿಸಲಾಗಿದೆ.

ಆಯುಕ್ತರು
ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ

**ಇವರಿಗೆ; ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ;**

1) ಸಂಬಂಧಪಟ್ಟ ಅಭ್ಯರ್ಥಿಗಳಿಗೆ/ಅತಿಥಿ ಉಪನ್ಯಾಸಕರಿಗೆ
2) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ
3) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
4) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
5) ಕಛೇರಿ ಪ್ರತಿ